# ಹೇಳಿದರೆ ನಮ್ಮ ಮೇಲೆ ಯಾಕಮ್ಮ ಸಿಟ್ಟು

1. **Ref.:** Dasara Padagalu – Purandara Dasara Keerthane, Samyukta Samputa, Edited by Shri Pavanje Gururao, Sriman Madhwa Siddantha Granthalaya, Udupi, page No. 623.
2. **Ref.:** Purandara Sahitya Darshana, Samputa 4, Keerthana Darshana edited by Prof. S.K. Ramachandra Rao, page No. 104.
3. **Note:** Lyrics in the above references books are fully matching and the singer has followed these lyrics.
4. **Note:** This song is not available in Shri Betageri Krishna Sharma and Shri Bengeri Huchha Rayaru books.

ರಾಗ: ಶಂಕರಾಭರಣ ತಾಳ: ಏಕ

ಹೇಳಿದರೆ ನಮ್ಮ ಮೇಲೆ ಯಾಕಮ್ಮ ಸಿಟ್ಟು, ಇಂಥ
ಗಾಡಿಗಾರ ಮಗನ ಪಡೆದ ಮೇಲೆ ನೀವಿಷ್ಟು || ಪ ||

ಸಣ್ಣ ರುಮಾಲು ಕಟ್ಟಿ ಚುಂಗ ಬಿಟ್ಟು, ಪಣೆಗೆ
ಬಣ್ಣಿಸಿ ಕಸ್ತೂರಿ ತಿಲಕವನಿಟ್ಟು
ಚಿಣ್ಣಿಕೋಲು ಚೆಂಡು ಬುಗುರಿ ಕೈಯಲಿಟ್ಟು, ಪೊಸ
ಬೆಣ್ಣೆಯ ಮೆಲ್ಲು ಹೋಗೆಂದು ಕಳುಹಿಬಿಟ್ಟು || 1 ||

ಕರೆದು ಕೈಯಲ್ಲಿ ಚಿಟ್ಟೆಬೆಲ್ಲ ಕೊಟ್ಟು, ಚಿಕ್ಕ
ಹರಳು ಕಲ್ಲುಗಳನ್ನ ಆರಿಸಿ ಕೊಟ್ಟು
ವಾರಿಗೆಯ ಪುಂಡರನ್ನು ಮಾಡಿಕೊಟ್ಟು, ಗೋಪಿ
ಊರನೆಲ್ಲ ಸುಲಿಯೆಂದು ಕಳುಹಿಕೊಟ್ಟು || 2 ||

ಹೋಗೆಂದು ರಂಗನ ಕಳುಹಿಕೊಟ್ಟು, ಗೋಪಿ
ಆಗ ಭೋಗಂಗಳೆಲ್ಲ ತುಂಬಿಕೊಟ್ಟು
ನಿಗಮಗೋಚರನೆಂಬ ಪೆಸರನಿಟ್ಟು, ಗೋಪಿ
ಪುರಂದರ ವಿಠಲನ್ನ ಬೆಳೆಸಿಬಿಟ್ಟು || 3 ||

**ಕಠಿಣ ಪದಗಳ ಅರ್ಥ ಮತ್ತು ಟಿಪ್ಪಣಿ:**

**ಚಿಟ್ಟೆ ಬೆಲ್ಲ** – ಸಣ್ಣ ತುಂಡು; ಒಂದು ಅಳತೆ.

**ವಾರಿಗೆಯ** – ಓರಗೆಯ, ಒಂದೇ ವಯಸ್ಸಿನ.

**ಆಗಭೋಗಂಗಳ** – ಪಾಪದ ಸುಖಗಳನ್ನು.

**Classification:** Keerthane
**Ankita:** purandara vittala
**Location:** NA
**Category:** Krishna stuti
**Sub-Category:** sittu, gopi, Krishna, Kasturi, benne, kai, bella, kallu, ooru, ranga, bhoga,
**Pravachana:** NA
**Explanation:** NA